# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **145 (06)** |
| **ಸದಸ್ಯರ ಹೆಸರು** | : | **ಶ್ರೀ ಸುನೀಲ್ ವಲ್ಯಾಪುರ್<br>(ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸುವ ದಿನಾಂಕ** | : | **11.08.2025** |
| **ಉತ್ತರಿಸುವವರು** | : | **ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು** |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಕಾಡಾನೆ ದಾಳಿಗೆ ಬಲಿಯಾದವರ ಸಂಖ್ಯೆ ಎಷ್ಟು: (ಜಿಲ್ಲಾವಾರು ಮಾಹಿತಿ ನೀಡುವುದು)</td><td>ಕಳೆದ 02 ವರ್ಷಗಳಲ್ಲಿ ರಾಜ್ಯದಲ್ಲಿ ಆನೆ ದಾಳಿಯಿಂದ ಮೃತಪಟ್ಟಿರುವ ಪ್ರಕರಣದ ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-01ರಲ್ಲಿ ಒದಗಿಸಿದೆ.</td></tr>
<tr><td>ಆ)</td><td>ರಾಜ್ಯದಲ್ಲಿ ಕಾಡಾನೆ ದಾಳಿಗೆ ಬಲಿಯಾದ ಕುಟುಂಬಕ್ಕೆ ನೀಡುತ್ತಿರುವ ಪರಿಹಾರ ಎಷ್ಟು: (ಸಂಪೂರ್ಣ ಮಾಹಿತಿ ನೀಡುವುದು)</td><td>ರಾಜ್ಯದಲ್ಲಿ ಕಾಡಾನೆ ದಾಳಿಗೆ ಬಲಿಯಾದ ಕುಟುಂಬದ ವಾರಸುದಾರರಿಗೆ ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್‌ಡಬ್ಲ್ಯೂಎಲ್ 2022 ದಿನಾಂಕ: 29-04-2025ರ ಪ್ರಕಾರ ರೂ.20.00 ಲಕ್ಷಗಳನ್ನು ಪಾವತಿಸಲಾಗುತ್ತಿದೆ. ಅಲ್ಲದೇ ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್‌ಡಬ್ಲ್ಯೂಎಲ್ 2022 ದಿನಾಂಕ: 24-05-2023ರಂತೆ 05 ವರ್ಷಗಳವರೆಗೆ ಮಾಸಿಕ ರೂ.4,000 ಗಳ ಮಾಸಾಶನವನ್ನು ಕುಟುಂಬದ ವಾರಸುದಾರರಿಗೆ ಪಾವತಿಸಲಾಗುತ್ತಿದೆ.</td></tr>
<tr><td>ಇ)</td><td>ಕಾಡಾನೆ ಸ್ಥಳಾಂತರ ಅಥವಾ ಗ್ರಾಮಗಳಿಗೆ ಬರದಂತೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಸ್ಥಳಾಂತರ ಮಾಡಿದ ಅಥವಾ ಕಳೆದ 2 ವರ್ಷಗಳಲ್ಲಿ ಸೆರೆ ಹಿಡಿದ ಕಾಡಾನೆಗಳ ಸಂಖ್ಯೆ ಎಷ್ಟು:</td><td>ಕಳೆದ 2 ವರ್ಷಗಳಲ್ಲಿ ಮಾನವ- ಆನೆ ಸಂಘರ್ಷಕ್ಕೆ ಕಾರಣವಾದ ಕಾಡಾನೆಗಳನ್ನು ಸೆರೆ ಹಿಡಿಯಲಾಗಿದ್ದು, ಅವುಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಸೆರೆಹಿಡಿಯಲಾದ ಆನೆಗಳ ಸಂಖ್ಯೆ</th></tr>
<tr><td>1.</td><td>2023-24</td><td>16</td></tr>
<tr><td>2.</td><td>2024-25</td><td>09</td></tr>
<tr><td>3.</td><td>2025-26 (ಜುಲೈ ಅಂತ್ಯಕ್ಕೆ)</td><td>04</td></tr>
</table>
ರಾಜ್ಯದಲ್ಲಿ ಕಾಡಾನೆಗಳು ಗ್ರಾಮಗಳಿಗೆ ಬರದಂತೆ ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>
ಭೌತಿಕ ಅಡೆತಡೆಗಳ ನಿರ್ಮಾಣ:
<ul>
<li>ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದೆ.</li>
<li>ರಾಜ್ಯದಲ್ಲಿ ಮಾನವ-ಆನೆ ಸಂಘರ್ಷ ಹೆಚ್ಚಾಗಿರುವ ಪ್ರದೇಶಗಳಲ್ಲಿ ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ನಿಯಂತ್ರಿಸಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಬಳಸಿಕೊಂಡು ರೈಲ್ವೆ ಬ್ಯಾರಿಕೇಡ್</li>
</ul>
</td></tr>
</table>

ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದ್ದು, ಒಟ್ಟು 332.962 ಕಿ.ಮೀ ರೈಲ್ವೆ ಬ್ಯಾರಿಕೇಡ್ ನಿರ್ಮಿಸಲಾಗಿದೆ.

**ಆನೆ ಕಾರ್ಯಪಡೆಗಳ ಸ್ಥಾಪನೆ:**

- ಸರ್ಕಾರವು ದಿನಾಂಕ:21.11.2022 ರ ಆದೇಶದಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ದಿನಾಂಕ:01.02.2023ರ ಆದೇಶದಲ್ಲಿ ಚಾಮರಾಜನಗರ ಜಿಲ್ಲೆ, ದಿನಾಂಕ:30.06.2023 ರ ಆದೇಶದಲ್ಲಿ ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಮತ್ತು ದಿನಾಂಕ:18.05.2024 ರ ಆದೇಶದಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಪ್ರತಿ ಜಿಲ್ಲೆಗೊಂದರಂತೆ ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ 08 ಆನೆ ಕಾರ್ಯಪಡೆ (Elephant Task Force) ನ್ನು ರಚಿಸಲಾಗಿರುತ್ತದೆ.
- ರಾಜ್ಯದಲ್ಲಿ ಮಾನವ- ಆನೆ ಸಂಘರ್ಷ ಉಂಟಾಗುವ ಸಂದರ್ಭಗಳಲ್ಲಿ ಕಾಡಾನೆಗಳನ್ನು ಸೆರೆಹಿಡಿಯುವ ಕಾರ್ಯಾಚರಣೆಗಾಗಿ ದುಬಾರೆ, ಮತ್ತಿಗೋಡು, ಬಳ್ಳೆ, ಹಾರಂಗಿ, ಭೀಮನಕಟ್ಟೆ ಮತ್ತು ರಾಮಾಪುರ ಆನೆ ಶಿಬಿರಗಳಲ್ಲಿನ ಪಳಗಿದ ಆನೆಗಳನ್ನು ಬಳಸಿಕೊಂಡು ನುರಿತ ಪಶು ವೈದ್ಯಾಧಿಕಾರಿ, ಮಾವುತ ಹಾಗೂ ಇತರೆ ಸಿಬ್ಬಂದಿಗಳೊಳಗೊಂಡ ಮೂರು ತಂಡಗಳನ್ನು ರಚಿಸಲಾಗಿರುತ್ತದೆ. ಸದರಿ ತಂಡವು ರಾಜ್ಯದ ಯಾವುದೇ ಭಾಗದಿಂದ ಕಾಡಾನೆ ಸೆರೆಹಿಡಿಯುವ ಕಾರ್ಯಾಚರಣೆಗೆ ಬೇಡಿಕೆ ಬಂದಾಗ ಈ ತಂಡಗಳಲ್ಲಿ ಒಂದ ತಂಡವನ್ನು ಕಾರ್ಯಾಚರಣೆಗೆ ನಿಯೋಜಿಸಲಾಗುತ್ತಿದೆ.

**ಜಲ ಸಂಪನ್ಮೂಲ ಅಭಿವೃದ್ಧಿ:**

- ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನ ಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿ ಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.

**ಆವಾಸ ಸ್ಥಾನ ಅಭಿವೃದ್ಧಿ:**

- ಅರಣ್ಯ ವ್ಯಾಪ್ತಿಯ ಹುಲ್ಲುಗಾವಲು ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲಿಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ, ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

**ತ್ವರಿತ ಕಾರ್ಯಾಚರಣೆ:**

- ಆನೆ ಕಾರ್ಯಪಡೆ (ETF) ಮತ್ತು ಚಿರತೆ ಕಾರ್ಯಪಡೆ (LTF) ಗಳಿಗೆ 24X7 ಕಾರ್ಯ ನಿರ್ವಹಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.
- ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.
- ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.

- ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.
- ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.
- ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.
- ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗುತ್ತಿದೆ.
- ವನ್ಯಪ್ರಾಣಿಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಈಗಾಗಲೇ ರಚಿಸಿರುವ RRT, ADC, ಮತ್ತು ETF ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಂಡಗಳನ್ನು ಒಟ್ಟುಗೂಡಿಸಿ ಮಾನವ-ವನ್ಯಜೀವಿ ಸಂಘರ್ಷ ಉಪ ತಂಡಗಳಾಗಿ ರಚಿಸಿ ಆಯ್ದ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.
- ಸರ್ಕಾರದ ಆದೇಶ ಸಂಖ್ಯೆ: ಅಪಜೀ 96 ಎಫ್.ಡಬ್ಲ್ಯೂ.ಎಲ್. 2016 ದಿನಾಂಕ: 01.10.2016 ರಲ್ಲಿ ಮಾನವ ಪ್ರಾಣಕ್ಕೆ ಅಥವಾ ಸ್ವತ್ತಿಗೆ ಅಪಾಯಕಾರಿಯಾಗಿರುವ ಹಾಗೂ ಬೆಳೆನಾಶ ಮಾಡುವ ಕಾಡು ಹಂದಿಗಳನ್ನು ಷರತ್ತುಬದ್ಧವಾಗಿ ಕೊಲ್ಲಲು ಅನುಮತಿ ನೀಡುವ ಬಗ್ಗೆ ಆದೇಶಿಸಲಾಗಿದೆ.

**ಅರಿವು ಮೂಡಿಸಲು:**

- ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.

**ಸಹಾಯ ಧನ:**

- ರೈತರಿಗೆ ಸಬ್ಸಿಡಿ ದರದಲ್ಲಿ ಸೋಲಾರ್ ಬೇಲಿ ನಿರ್ಮಾಣ ಮಾಡಲು ಉತ್ತೇಜನ ನೀಡಲಾಗುತ್ತಿದೆ ಹಾಗೂ ಅರಣ್ಯದ ಅಂಚಿನಲ್ಲಿ ಬರುವ ಖಾಸಗಿ ಜಮೀನುಗಳ ಸುತ್ತಾ ಸರಕಾರದ ವತಿಯಿಂದ ದೊರಕುವ ಶೇ. 50 ಸಬ್ಸಿಡಿಯನ್ನು ಬಳಸಿಕೊಂಡು ಸೌರಶಕ್ತಿ ಬೇಲಿಯನ್ನು ನಿರ್ಮಿಸಲಾಗುತ್ತಿದೆ.
- ರಕ್ಷಿತ ಅರಣ್ಯ ಪ್ರದೇಶಗಳ ಕಾಡಂಚಿನ ಆಯ್ದ ಗ್ರಾಮಗಳಿಗೆ ಎಲ್ ಪಿ ಜಿ ಗ್ಯಾಸ್, ಸೋಲಾರ್ ದೀಪಗಳನ್ನು ಇಲಾಖೆಯ ವತಿಯಿಂದ ನೀಡಲಾಗುತ್ತಿದೆ.
- ರಕ್ಷಿತ ಅರಣ್ಯ ಪ್ರದೇಶಗಳ ಕಾಡಂಚಿನ ಆಯ್ದ ಗ್ರಾಮಗಳಿಗೆ Cattle Shed ನಿರ್ಮಾಣ ಮಾಡಲು ಸಹಾಯ ಮಾಡಲಾಗುತ್ತಿದೆ.

**ತಂತ್ರಜ್ಞಾನ ಬಳಕೆ:**

- ರೇಡಿಯೋ ಕಾಲರ್ ಅಳವಡಿಸಿರುವ ಕಾಡಾನೆಗಳ ಚಲನ-ವಲನಗಳನ್ನು ದಿನನಿತ್ಯ ಗಮನಿಸಲು ಇಲಾಖಾವತಿಯಿಂದ "ಹೆಜ್ಜೆ" ಎಂಬ ಡ್ಯಾಶ್ ಬೋರ್ಡ್‌ನ್ನು ಸಿದ್ಧಪಡಿಸಲಾಗಿದೆ.
- ಮಾನವ- ಆನೆ ಸಂಘರ್ಷ ಹೆಚ್ಚಿರುವ 10 ಜಿಲ್ಲೆಗಳಲ್ಲಿ **"ಅನೆ ಎಲ್ಲಿ"** ಎಂಬ ತಂತ್ರಜ್ಞಾನ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ. ಈ ವ್ಯವಸ್ಥೆಯು ಸಾರ್ವಜನಿಕ ದೂರುಗಳು, ಗಸ್ತು ತಿರುಗುವಿಕೆ ಮುಂತಾದ ವಿವಿಧ ಮಾಹಿತಿಗಳ ಮೂಲಕ ಒಂದು ಪ್ರದೇಶದಲ್ಲಿ ಆನೆಗಳ ಚಲನವಲನವನ್ನು ಮೇಲ್ವಿಚಾರಣೆ ಮಾಡುತ್ತದೆ. ಈ ಮಾಹಿತಿಯು ಆನೆಗಳ ಚಲನವಲನದ ಮಾದರಿಯನ್ನು ಪತ್ತೆಹಚ್ಚಲು ಮತ್ತು ಸಾರ್ವಜನಿಕರಿಗೆ ಮುಂಚಿನ ಎಚ್ಚರಿಕೆ ಸಂದೇಶಗಳನ್ನು ಕಳುಹಿಸಲು ಸಹಾಯ ಮಾಡುತ್ತಿದೆ.

| | | |
|---|---|---|
| | | • ಕಾಡಂಚಿನ ಗ್ರಾಮಗಳಲ್ಲಿ ವನ್ಯಪ್ರಾಣಿಗಳು ಬಂದಂತಹ ಸಂದರ್ಭಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು Advance alert system ಅನ್ನು ತಯಾರಿಸಲಾಗಿದೆ. ಇದರಿಂದಾಗಿ ಸಾರ್ವಜನಿಕರಿಗೆ ನೇರವಾಗಿ ಸಂದೇಶಗಳನ್ನು ಕಳುಹಿಸಲಾಗುತ್ತಿದೆ.<br>• ಕಾಡಾನೆ ಇರುವ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಎಚ್ಚರಿಕೆ/ ಮಾಹಿತಿ ನೀಡಲು ಡಿಜಿಟಲ್ ಬೋರ್ಡ್‌ಗಳನ್ನು ಅಳವಡಿಸಲಾಗಿದೆ.<br>• ಅರಣ್ಯದಂಚಿನ ಆಯ್ದ ಪ್ರದೇಶಗಳಲ್ಲಿ "**AI**" Based Camera ಗಳನ್ನು ಅಳವಡಿಸಲಾಗಿದ್ದು, ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ.<br>• ಡ್ರೋನ್‌ಗಳ ಮುಖಾಂತರ ವನ್ಯಪ್ರಾಣಿಗಳ ಚಲನ-ವಲನಗಳನ್ನು ಗಮನಿಸಲಾಗುತ್ತಿದೆ. |
| ಈ) | ಕಾಡಾನೆ ದಾಳಿಗೆ ಬಲಿಯಾದ ಕುಟುಂಬದವರಿಗೆ ಕೆಲಸ ನೀಡುವುದರ ಬಗ್ಗೆ ಸರ್ಕಾರ ಚಿಂತಿಸಿದೆಯೇ: ಇದ್ದಲ್ಲಿ, ಈವರೆಗೆ ಎಷ್ಟು ಕುಟುಂಬಗಳಿಗೆ ಕೆಲಸ ನೀಡಲಾಗಿದೆ: (ಜಿಲ್ಲಾವಾರು ಮಾಹಿತಿ ನೀಡುವುದು) | ಕಾಡಾನೆ ದಾಳಿಗೆ ಬಲಿಯಾದ ಕುಟುಂಬದವರಿಗೆ ಕೆಲಸ ನೀಡುವುದರ ಬಗ್ಗೆ ಯಾವುದೇ ಪ್ರಸ್ತಾವನೆಯಿರುವುದಿಲ್ಲ. ಆದರೇ, ಸರ್ಕಾರದ ಆದೇಶ ಸಂಖ್ಯೆ: ಅಪಜೀ 114 ಎಫ್‌ಡಬ್ಲೂಎಲ್ 2022 ದಿನಾಂಕ: 24-05-2023ರಂತೆ 05 ವರ್ಷಗಳವರೆಗೆ ಮಾಸಿಕ ರೂ.4,000 ಗಳ ಮಾಸಾಶನವನ್ನು ಕುಟುಂಬದ ವಾರಸುದಾರರಿಗೆ ಪಾವತಿಸಲಾಗುತ್ತಿದೆ. |
| ಉ) | ಇ ಟಿ ಎಫ್ (ಎಲಿಪ್ಯಾಂಟ್ ಟಾಸ್ಕ್ ಪೋರ್ಸ್)ನ ನಿಯಮಗಳೇನು: ಮತ್ತು ಇದು ಹೇಗೆ ಕೆಲಸ ನಿರ್ವಹಿಸುತ್ತದೆ: ಮತ್ತು ರಾಜ್ಯದಲ್ಲಿ ಯಾವ ಭಾಗದಲ್ಲಿ ಇದನ್ನು ಅನುಷ್ಠಾನಗೊಳಿಸಲಾಗಿದೆ: ಇದರಲ್ಲಿ ಎಷ್ಟು ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ? (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು) | ಮಾನವ- ಆನೆ ಸಂಘರ್ಷ ಹೆಚ್ಚಾಗಿರುವ ಜಿಲ್ಲೆಗಳಲ್ಲಿ ಸರ್ಕಾರದ ಆದೇಶದನ್ವಯ ಒಟ್ಟು 08 ಆನೆ ಕಾರ್ಯಪಡೆಯನ್ನು ರಚಿಸಲಾಗಿದ್ದು, ಅವುಗಳ ವಿವರ ಈ ಕೆಳಕಂಡಂತಿರುತ್ತದೆ.<br>• ಹಾಸನ, ಕೊಡಗು, ಚಿಕ್ಕಮಗಳೂರು, ಮೈಸೂರು, ಚಾಮರಾಜನಗರ, ರಾಮನಗರ, ಬೆಂಗಳೂರು ಮತ್ತು ಬಂಡೀಪುರ<br><br>ಆನೆ ಕಾರ್ಯಪಡೆಯ ರಚನೆ:<br>• ಉಪ ಅರಣ್ಯ ಸಂರಕ್ಷಣಾಧಿಕಾರಿ ನೇತೃತ್ವದಲ್ಲಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ವಲಯ ಅರಣ್ಯಾಧಿಕಾರಿ, ಪಶುವೈದ್ಯರು, ಉಪ ವಲಯ ಅರಣ್ಯಾಧಿಕಾರಿಗಳು, ಗಸ್ತು ಅರಣ್ಯ ಪಾಲಕರು ಮತ್ತು ಇತರ ಸಿಬ್ಬಂದಿಯನ್ನು ಹೊಂದಿರುತ್ತದೆ.<br>• ವಾಕಿ-ಟಾಕಿಗಳು, ಚಾಲನಾ ಸಾಮಗ್ರಿಗಳು, ಜಿಐಎಸ್ ಆಧಾರಿತ ಟ್ರ್ಯಾಕಿಂಗ್ ಮತ್ತು ಆನೆಗಳನ್ನು ಪತ್ತೆಹಚ್ಚಲು ಮತ್ತು ಹೆಮ್ಮೆಟ್ಟಿಸಲು ಅಗತ್ಯವಾದ ಇತರ ಉಪಕರಣಗಳನ್ನು ಹೊಂದಿದೆ.<br>• ಆನೆಗಳ ಚಲನವಲನದ ಬಗ್ಗೆ ಕಣ್ಗಾವಲುಗಾಗಿ 24x7 ನಿಯಂತ್ರಣ ಕೊಠಡಿಯನ್ನು ರಚಿಸಲಾಗಿದೆ<br><br>ಕಾರ್ಯಗಳು:<br>• ಅರಣ್ಯ ಪ್ರದೇಶದಲ್ಲಿನ ಗಸ್ತು, ರೇಡಿಯೋ ಕಾಲರ್‌ಗಳು, ಸಮುದಾಯದಿಂದ ಪಡೆದಿರುವ ಮಾಹಿತಿಯ ಮೂಲಕ ಆನೆಗಳ ಚಲನವಲನಗಳನ್ನು ಮೇಲ್ವಿಚಾರಣೆ ಮಾಡುವುದು.<br>• ಎಸ್‌ಎಂಎಸ್ ಎಚ್ಚರಿಕೆಗಳು, ಪ್ರದರ್ಶನ ಫಲಕಗಳು ಮತ್ತು ಇತರ ಮುಂಚಿತ ಎಚ್ಚರಿಕೆ ವ್ಯವಸ್ಥೆಗಳ |

| | | |
|---|---|---|
| | | ಮೂಲಕ ಆನೆಗಳ ಚಲನವಲನದ ಬಗ್ಗೆ ಸಮುದಾಯಗಳಿಗೆ ಎಚ್ಚರಿಕೆ ನೀಡುವುದು.<br>• ಅಗತ್ಯವಿದ್ದಾಗ ಆನೆ ಹಿಮ್ಮೆಟ್ಟಿಸುವ ಕಾರ್ಯಾಚರಣೆಗಳನ್ನು ನಡೆಸುವುದು<br>• ವನ್ಯಜೀವಿಗಳೊಂದಿಗೆ ಸಾರ್ವಜನಿಕ ಮುಖಾಮುಖಿಗಳನ್ನು ಕಡಿಮೆ ಮಾಡಲು ಮತ್ತು ಸಂಘರ್ಷ ಪ್ರಕರಣಗಳನ್ನು ಕಡಿಮೆ ಮಾಡಲು ಸಮುದಾಯದಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ನಡೆಸುವುದು. |

**ಸಂಖ್ಯೆ: ಅಪಜೀ 165 ಎಫ್‌ಡಬ್ಲ್ಯೂಎಲ್ 2025**

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

ಅನುಬಂಧ-1

| ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ಆನೆ ದಾಳಿಯಿಂದ ರೈತರು ಮತ್ತು ಸಾರ್ವಜನಿಕರು ಸಾವನ್ನಪ್ಪಿರುವ ಜಿಲ್ಲಾವಾರು ವಿವರ | | | | |
|---|---|---|---|---|
| ಕ್ರ. ಸ | ಜಿಲ್ಲೆ | ವರ್ಷ | | |
| | | 2023-24 | 2024-25 | 2025-26 |
| 1 | ಕೊಡಗು | 11 | 7 | 3 |
| 2 | ಚಾಮರಾಜನಗರ | 12 | 4 | 2 |
| 3 | ಬೆಂಗಳೂರು/ನಗರ/ ಗ್ರಾಮಾಂತರ/ ಬನ್ನೇರುಘಟ್ಟ | 3 | 2 | - |
| 4 | ರಾಮನಗರ | 7 | 2 | - |
| 5 | ಕೋಲಾರ | - | 4 | - |
| 6 | ಹಾಸನ | 4 | 6 | 2 |
| 7 | ತುಮಕೂರು | - | - | |
| 8 | ಮೈಸೂರು | 3 | 4 | 1 |
| 9 | ಮಂಡ್ಯ | 1 | - | |
| 10 | ಚಿಕ್ಕಮಗಳೂರು | 5 | 5 | 2 |
| 12 | ಶಿವಮೊಗ್ಗ | 1 | 2 | 1 |
| 13 | ದಕ್ಷಿಣ ಕನ್ನಡ | 1 | - | 2 |
| **Total** | | **48** | **36** | **13** |

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ(ವನ್ಯಜೀವಿ)

ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರು

ಕರ್ನಾಟಕ, ಬೆಂಗಳೂರು.